**ಗಂಗಾರಾಮ್ ಬಡೇರಿಯಾ,** ಭಾ.ಆ.ಸೇ
ಸರ್ಕಾರದ ಕಾರ್ಯದರ್ಶಿ (ಪಂ.ರಾ)
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಇಲಾಖೆ.

**ಕರ್ನಾಟಕ ಸರ್ಕಾರ**

ಕರ್ನಾಟಕ ಸರ್ಕಾರ ಸಚಿವಾಲಯ
3ನೇ ಹಂತ, 3ನೇ ಮಹಡಿ
ಬಹುಮಹಡಿಗಳ ಕಟ್ಟಡ, ಬೆಂಗಳೂರು-
ದೂ : 080-22384574/2203294
ಫ್ಯಾಕ್ಸ್ : 080-2238952
ಇ-ಮೇಲ್ : secyrdpr@gmail.com
secy-rdpr@Karnataka.gov.in

ಅ.ಸ. ಪತ್ರ ಸಂಖ್ಯೆ: ಗ್ರಾಅಪ 381 ಗ್ರಾಪಂಅ 2014 ದಿನಾಂಕ: 06-06-2014

ಮಾನ್ಯರೆ,

**ವಿಷಯ:** ಸಕಾಲ ಸೇವೆಗಳನ್ನು ನಿಗದಿತ ಅವಧಿಯಲ್ಲಿ ನೀಡಲು ಮತ್ತು ಮೇಲ್ಮನವಿಗಳನ್ನು ನಿಗದಿತ ಸಮಯದಲ್ಲಿ ಇತ್ಯರ್ಥಪಡಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 39 ಜಿಪಸ 2012, ದಿನಾಂಕ: 02-04-2012.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 39 ಜಿಪಸ 2012 (ಭಾಗ-3) ದಿನಾಂಕ: 14-03-2012.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 119 ನಾಸೇಖಾ 2012 ದಿನಾಂಕ:26-10-2012.

----

ರಾಜ್ಯದ 5627 ಗ್ರಾಮ ಪಂಚಾಯತಿಗಳಲ್ಲಿ ದಿನಾಂಕ:02-04-2012 ರಿಂದ ಸಕಾಲ ಸೇವೆಯನ್ನು ಜಾರಿಗೊಳಿಸಲಾಗಿದ್ದು, ಸದರಿ ಸೇವೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಗೆ ಸಂಬಂಧಿಸಿದಂತೆ 13 ಸೇವೆಗಳನ್ನು ಒದಗಿಸುವಂತೆ ಉಲ್ಲೇಖ (1) ಮತ್ತು ಉಲ್ಲೇಖ (3) ರ ಸರ್ಕಾರದ ಅಧಿಸೂಚನೆಯಲ್ಲಿ ತಿಳಿಸಲಾಗಿರುತ್ತದೆ.

ಉಲ್ಲೇಖ (2) ರ ಸುತ್ತೋಲೆಯಲ್ಲಿ ಸಕಾಲದಡಿ ಸೇವೆಗಳನ್ನು ಸಾರ್ವಜನಿಕರಿಗೆ ನೀಡಲು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಯನ್ನು ಗೊತ್ತುಪಡಿಸಿದ ಅಧಿಕಾರಿಯಾಗಿ ಮತ್ತು ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯನ್ನು ಸಕ್ಷಮ ಪ್ರಾಧಿಕಾರಿಯನ್ನಾಗಿ ಹಾಗೂ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ (ಗ್ರಾಮ ಪಂಚಾಯತಿ ಆಡಳಿತ ವಿಷಯಗಳನ್ನು ನಿರ್ವಹಿಸುವವರು) ಮೇಲ್ಮನವಿ ಪ್ರಾಧಿಕಾರವನ್ನಾಗಿ ಮಾಡಲಾಗಿದೆ.

ಸಕಾಲದಡಿ ಗ್ರಾ.ಅ.ಪಂ.ರಾಜ್ ಇಲಾಖೆಯಲ್ಲಿ ಗುರುತಿಸಿರುವ ಸೇವೆಗಳನ್ನು ಗ್ರಾಮ ಪಂಚಾಯತಿಗಳು ನಿಗದಿತ ಕಾಲಮಿತಿಯಲ್ಲಿ ಒದಗಿಸುತ್ತಿರುವ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಇವರು ಉಸ್ತುವಾರಿ ನಡೆಸಲು ತಿಳಿಸಲಾಗಿದೆ. ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳುತ್ತಿರುವ ಬಗ್ಗೆ ಉಪಕಾರ್ಯದರ್ಶಿ (ಗ್ರಾಮ ಪಂಚಾಯತಿ ಆಡಳಿತ ವಿಷಯಗಳನ್ನು ನಿರ್ವಹಿಸುವವರು) ಇವರು ಉಸ್ತುವಾರಿ ನಡೆಸಲು ತಿಳಿಸಲಾಗಿದೆ.

ಗ್ರಾ.ಅ.ಪಂ.ರಾಜ್ ಇಲಾಖೆಗೆ ಸಂಬಂಧಿಸಿದಂತೆ ಸಕಾಲ ಸೇವೆ ಬಗ್ಗೆ ಸಮಗ್ರ ಮೇಲುಸ್ತುವಾರಿ ನಡೆಸುವುದು ಮತ್ತು ಯಶಸ್ವಿ ಅನುಷ್ಠಾನಕ್ಕೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಇವರನ್ನು ಸಂಪೂರ್ಣ ಜವಾಬ್ದಾರರನ್ನಾಗಿ ಮಾಡಲಾಗಿದೆ.

ದಿನಾಂಕ:05-06-2014 ರಂದು ನಡೆದ ನೋಡಲ್ ಅಧಿಕಾರಿಗಳ ಸಭೆಯಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಡಳಿತ ಸುಧಾರಣೆ) ರವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದಂತೆ ಸಕಾಲ ಸೇವೆಯಡಿ ಬಾಕಿ ಇರುವ ಅರ್ಜಿಗಳು ಮತ್ತು ಮೇಲ್ಮನವಿಗಳ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದು, ಈ ಬಗ್ಗೆ ಜರೂರಾಗಿ ಕ್ರಮ ಕೈಗೊಂಡು ವರದಿ ನೀಡುವಂತೆ ನಿರ್ದೇಶನ ನೀಡಿರುತ್ತಾರೆ.

ಆದುದರಿಂದ, ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ನ್ನು ಪರಿಣಾಮಕಾರಿಯಾಗಿ ಹಾಗೂ ಕ್ರಮಬದ್ಧವಾಗಿ ಜಾರಿಗೊಳಿಸಲು ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ, ಉಪ ಕಾರ್ಯದರ್ಶಿ (ಅಭಿವೃದ್ಧಿ) ರವರಿಗೆ, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮತ್ತು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದೆ.

1. ನಿಗದಿಪಡಿಸಿರುವ ಅವಧಿಯೊಳಗೆ ಗ್ರಾಮ ಪಂಚಾಯತಿಯು ಸಕಾಲ ಅಧಿನಿಯಮದಡಿ ಸೇವೆಗಳನ್ನು ಒದಗಿಸುವುದು.
2. ಸಕಾಲ ಸೇವೆಯಡಿ ಅರ್ಜಿಯನ್ನು ತಿರಸ್ಕರಿಸಿದರೆ, ಯಾವ ಕಾರಣಕ್ಕಾಗಿ ಅರ್ಜಿಯನ್ನು ತಿರಸ್ಕರಿಸಲಾಗಿದೆ ಎಂಬುದರ ಬಗ್ಗೆ ವಿಳಂಬ ಮಾಡದೆ ಅರ್ಜಿದಾರರಿಗೆ ಹಿಂಬರಹ ನೀಡುವುದು.
3. ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯನ್ನು ಸಕ್ಷಮ ಪ್ರಾಧಿಕಾರಿಯನ್ನಾಗಿ ಮಾಡಲಾಗಿದ್ದು, ನಿಗದಿತ ಅವಧಿಯೊಳಗೆ ಕಡ್ಡಾಯವಾಗಿ ವಿಲೇ ಮಾಡತಕ್ಕದ್ದು. ಹಾಗೂ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ (ಗ್ರಾಮ ಪಂಚಾಯತಿ ಆಡಳಿತ ವಿಷಯಗಳನ್ನು ನಿರ್ವಹಿಸುವವರು) ಮೇಲ್ಮನವಿ ಪ್ರಾಧಿಕಾರವನ್ನಾಗಿ ಮಾಡಲಾಗಿದ್ದು, ನಿಗದಿತ ಅವಧಿಯೊಳಗೆ ಕಡ್ಡಾಯವಾಗಿ ವಿಲೇ ಮಾಡತಕ್ಕದ್ದು.
4. ಕರ್ನಾಟಕ ಸಕಾಲ ಸೇವೆಗಳ ನಿಯಮಗಳು, 2012 ರ ನಿಯಮ 16 ರಂತೆ 7 ಪ್ರಕರಣದಿಂದ ಹೆಚ್ಚು ವಿಳಂಬ / ವಿಫಲತೆಯನ್ನು ಹೊಂದಿರತಕ್ಕಂತಹ ಸರ್ಕಾರಿ ನೌಕರರಿಗೆ ನಮೂನೆ ಉ-4 ರಂತೆ ಇ-ಮೇಲ್ ಮೂಲಕ ಕಾರಣ ಕೇಳುವ ನೋಟೀಸು ನೀಡತಕ್ಕದ್ದು. ಕಾರಣಗಳು ಸಮರ್ಪಕವಾಗದೆ ಇರುವ ಸಂದರ್ಭದಲ್ಲಿ ಶಿಸ್ತಿನ ಕ್ರಮ ಜರುಗಿಸುವುದು.
5. ಸಕ್ಷಮ ಅಧಿಕಾರಿ ಮತ್ತು ಮೇಲ್ಮನವಿ ಪ್ರಾಧಿಕಾರ ತನ್ನ ಸಮಯ ಮಿತಿಯನ್ನು ಮೀರದ್ದರೆ ನಿಯಮ ಉ-5 ರಂತೆ ಇ-ಮೇಲ್ ಮೂಲಕ ಕಾರಣ ಕೇಳುವ ನೋಟೀಸು ನೀಡತಕ್ಕದ್ದು. ತಿಂಗಳ ಅಂತ್ಯಕ್ಕೆ ನಮೂನೆ ಉ-6 ರಲ್ಲಿ ಸಿಆಸುಇ ಇಲಾಖೆಗೆ ವರದಿ ಮಾಡತಕ್ಕದ್ದು.
6. ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕಡ್ಡಾಯವಾಗಿ ಸಕಾಲ ಯಶಸ್ವಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಪ್ರತಿ ತಿಂಗಳು ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ (ಅಭಿವೃದ್ಧಿ), ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಭೆ ನಡೆಸಿ ಪ್ರಗತಿ ಪರಿಶೀಲನೆ ನಡೆಸಿ ಸಭೆಯ ನಡವಳಿಯನ್ನು ಸಕಾಲ ಮಂಡಳಿಗೆ ಕಳುಹಿಸುವುದು.
7. ಕರ್ನಾಟಕ ಪಂ.ರಾಜ್ ಅಧಿನಿಯಮ 1993 ರ ಪ್ರಕರಣ 232 ರಂತೆ ತಾಲ್ಲೂಕು ಪಂಚಾಯತಿಯ ಸಂಬಂಧದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯು ಮತ್ತು ಗ್ರಾಮ ಪಂಚಾಯತಿ ಸಂಬಂಧದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಯು ಪರಿವೀಕ್ಷಣೆ ಮತ್ತು ಮೇಲ್ವಿಚಾರಣೆ ಮಾಡುವುದು.

ಮೇಲ್ಕಂಡಂತೆ ಕ್ರಮ ವಹಿಸಿರುವ ಬಗ್ಗೆ ಸರ್ಕಾರಕ್ಕೆ ಮತ್ತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ರವರಿಗೆ ಕೂಡಲೇ ವರದಿ ಸಲ್ಲಿಸುವಂತೆ ತಿಳಿಸಿದೆ.

**ಆದರಗಳೊಂದಿಗೆ,**

ತಮ್ಮ ವಿಶ್ವಾಸಿ,
ಸಹಿ/-

ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

**ಪ್ರತಿ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, 6ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು.

(ಗಂಗಾರಾಮ್ ಬಡೇರಿಯಾ)